# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 922 |
| ಸದಸ್ಯರ ಹೆಸರು | : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : 21.09.2022. |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲ್ಲೂಕು ವಿರುಪಾಕ್ಷಿಪುರ ಹೋಬಳಿ ಭೂಹಳ್ಳಿ ಗ್ರಾಮದ ಸರ್ವೆ ನಂ.101ರ ಸರ್ಕಾರಿ ಗೋಮಾಳ ಜಮೀನಿನಲ್ಲಿ ಪ್ರಭಾವಿ ವ್ಯಕ್ತಿಯೊಬ್ಬರು ಸ್ವಹಿತಾಸಕ್ತಿಗಾಗಿ ಅನಧಿಕೃತವಾಗಿ ರಸ್ತೆ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಚನ್ನಪಟ್ಟಣ ತಾಲ್ಲೂಕು, ವಿರೂಪಾಕ್ಷೀಪುರ ಹೋಬಳಿ, ಭೂಹಳ್ಳಿ ಗ್ರಾಮದ ಸ.ನಂ 101ರ ಸರ್ಕಾರಿ ಗೋಮಾಳ ಜಮೀನಿನಲ್ಲಿ ಪ್ರಭಾವಿ ವ್ಯಕ್ತಿಯೊಬ್ಬರು ಸ್ವಹಿತಾಸಕ್ತಿಗಾಗಿ ಅನಧಿಕೃತವಾಗಿ ರಸ್ತೆ ನಿರ್ಮಿಸಿರುವ ಕಂಡುಬಂದಿರುತ್ತದೆ.. |
| ಆ) | ಬಂದಿದ್ದಲ್ಲಿ, ಸದರಿಯವರ ವಿರುದ್ಧ ಭೂ ಕಂದಾಯ ಕಾಯ್ದೆಯಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಒತ್ತುವರಿ ತೆರವುಗೊಳಿಸಲಾಗಿದೆಯೇ; (ವಿವರ ನೀಡುವುದು) | ಒತ್ತುವರಿದಾರರಿಗೆ ಒತ್ತುವರಿ ತೆರವುಗೊಳಿಸಲು ನೋಟಿಸ್ ಜಾರಿಗೊಳಿಸಲಾಗಿದ್ದು, ಸದರಿಯವರು ಒತ್ತುವರಿ ತೆರವುಗೊಳಿಸಿರುವುದಿಲ್ಲ. ಆದ್ದರಿಂದ ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 192(ಎ) ರಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿರುತ್ತದೆ |
| ಇ) | ಇಲ್ಲವಾದಲ್ಲಿ, ಗೋಮಾಳ ಜಮೀನು ರಸ್ತೆಗಾಗಿ ಒತ್ತುವರಿಯಾಗಿದ್ದರೂ ಸಹ ಈವರೆಗೂ ಒತ್ತುವರಿ ತೆರವುಗೊಳಿಸದಿರಲು ಹಾಗೂ ಕ್ರಿಮಿನಲ್ ಮೊಕದ್ದಮೆ ಹೂಡದಿರಲು ಕಾರಣಗಳೇನು; (ವಿವರ ನೀಡುವುದು) | |
| ಈ) | ಹಾಗಿದ್ದಲ್ಲಿ, ಒತ್ತುವರಿ ತೆರವುಗೊಳಿಸದೇ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸದೇ ಕರ್ತವ್ಯ ಲೋಪವೆಸಗಿರುವ ಗ್ರಾಮ ಲೆಕ್ಕಿಗ, ಕಂದಾಯ ನಿರೀಕ್ಷಕ ಮತ್ತು ತಹಶೀಲ್ದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು) | ಪರಿಶೀಲಿಸಿ ವಿಳಂಬಕ್ಕೆ ಕಾರಣರಾದ ಅಧಿಕಾರಿ/ ನೌಕರರ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು |
| ಉ) | ಯಾವ ಕಾಲಮಿತಿಯಲ್ಲಿ ಒತ್ತುವರಿ ತೆರವುಗೊಳಿಸಿ, ಒತ್ತುವರಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಕಂದಾಯ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು; (ವಿವರ ನೀಡುವುದು) | ಶೀಘ್ರವಾಗಿ ಒತ್ತುವರಿ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲು ತಹಶೀಲ್ದಾರ್, ಚನ್ನಪಟ್ಟಣ ತಾಲ್ಲೂಕು, ರವರಿಗೆ ನಿರ್ದೇಶನ ನೀಡಲಾಗಿದೆ. ಪರಿಶೀಲಿಸಿ ವಿಳಂಬಕ್ಕೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು |

| | | |
|---|---|---|
| ಊ) | ಪ್ರಭಾವಿ ವ್ಯಕ್ತಿಯೊಬ್ಬರು, ಈ ಗೋಮಾಳ ಜಮೀನಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಭೂ ಮಂಜೂರಾದ ಜಮೀನುಗಳನ್ನು ಪಿ.ಟಿ.ಸಿ.ಎಲ್ ಕಾಯ್ದೆ ಉಲ್ಲಂಘಿಸಿ ಖರೀದಿಸಿದ್ದರೂ ಸಹ ಉಪ ವಿಭಾಗಾಧಿಕಾರಿಯವರು ವಿಚಾರಣೆ ನಡೆಸಿ ಮೂಲ ಮಂಜೂರುದಾರರಿಗೆ ಹಕ್ಕು ಪುನರ್ ಸ್ಥಾಪಿಸದಿರಲು ಕಾರಣಗಳೇನು? (ವಿವರ ನೀಡುವುದು) | ನಿಯಮಾನುಸಾರ ಪರಿಶೀಲಿಸಿ ವಿಚಾರಣಾ ಕ್ರಮ ಕೈಗೊಳ್ಳಲು ಉಪ ವಿಭಾಗಾಧಿಕಾರಿ ರವರಿಗೆ ಸೂಚಿಸಲಾಗಿರುತ್ತದೆ. |

ಸಂಖ್ಯೆ: ಆರ್‌ಡಿ 224 ಎಲ್‌ಜಿಕ್ಯೂ 2022 (ಇ)

(ಆರ್.ಅಶೋಕ)
ಕಂದಾಯ ಸಚಿವರು